AUGUST 29, 2024
ALL INDIA RADIO- DHARWAD
PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಘಟಪ್ರಭಾ ಪ್ರವಾಹ ಸಂತ್ರಸ್ತರಿಗೆ ಹಾನಿ ಹಿನ್ನೆಲೆ: ಶಾಶ್ವತ ಪರಿಹಾರ ಕಲ್ಪಿಸಲು ಶೀಘ್ರ ಕ್ರಮ–ಮುಖ್ಯಮಂತ್ರಿ ಸಿದ್ದರಾಮಯ್ಯ.
- ಹುಬ್ಬಳ್ಳಿ–ಧಾರವಾಡ ಅವಳಿ ನಗರ ಅಭಿವೃದ್ಧಿ: ಸಮನ್ವಯತೆಯಿಂದ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸಚಿವ ಸಂತೋ ್ ಲಾಡ್ ಸೂಚನೆ.
- ಕೇಂದ್ರ ನೀತಿ ಆಯೋಗ ಸಂಚಾಲಿತ, ಸಂಪೂರ್ಣತಾ ಅಭಿಯಾನ: ಕಲಬುರಗಿ ಜಿಲ್ಲೆಯ ಕಾಳಗಿ ತಾಲೂಕಿಗೆ ಎರಡನೇ ರ್‍ಯಾಂಕ್.
- ಹಾಕಿ ದಿಗ್ಗಜ, ಮೇಜರ್ ಧ್ಯಾನ್‌ಚಂದ್ ಅವರ ಜನ್ಮದಿನ ಹಿನ್ನೆಲೆ, ಇಂದು ದೇಶಾದ್ಯಂತ ರಾಷ್ಟ್ರೀಯ ಕ್ರೀಡಾ ದಿನ ಆಚರಣೆ.

ಈಗ ವಾರ್ತೆಗಳ ವಿವರ

*******

ಘಟಪ್ರಭಾ ನದಿ ಪ್ರವಾಹದಿಂದ ಪ್ರತಿವರ್ಷ ಉಂಟಾಗುತ್ತಿರುವ ಹಾನಿ ಕುರಿತು ಉನ್ನತ ಮಟ್ಟದ ಸಭೆ ನಡೆಸಿ, ಶೀಘ್ರ ಸೂಕ್ರ ಕ್ರಮ ಕೈಗೊಳ್ಳುವುದಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ತಮ್ಮನ್ನು ಭೇಟಿಯಾದ ಮುಧೋಳ ತಾಲೂಕಿನ ರೈತರ ನಿಯೋಗದೊಂದಿಗೆ ಚರ್ಚೆ ನಡೆಸಿದ ಅವರು, ನೀರಾವರಿ, ಕಂದಾಯ ಹಾಗೂ ಲೋಕೋಪಯೋಗಿ ಇಲಾಖೆ ಸಚಿವರೊಂದಿಗೆ ಆದಷ್ಟು ಬೇಗನೆ ಸಭೆ ನಡೆಸಿ ಈ ಕುರಿತು ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಘಟಪ್ರಭಾ ನದಿ ಪ್ರವಾಹದಿಂದ, ಕಳೆದ ನಾಲ್ಕು ವ ್ಗಗಳಲ್ಲಿ, ಒಟ್ಟು 34 ಸಾವಿರದ 639 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಸೂಕ್ತ ಬೆಳೆ ಪರಿಹಾರ ಹಾಗೂ ಶಾಶ್ವತ ಪರಿಹಾರ ಒದಗಿಸಬೇಕು ಎಂದು ಮುಧೋಳ ರೈತರ ನಿಯೋಗ, ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿತು.

*******

ಪಶ್ಚಿಮಘಟ್ಟ ಪ್ರದೇಶದಲ್ಲಿ, ಪರಿಸರ ಸೂಕ್ಷ್ಮ ವಲಯಗಳ ಕುರಿತು, ಕೇಂದ್ರ ಸರ್ಕಾರ ಇತ್ತೀಚೆಗೆ ಹೊರಡಿಸಿರುವ, 6ನೇ ಅಧಿಸೂಚನೆ ಹಿನ್ನೆಲೆ, ಸಚಿವ ಸಂಪುಟದ ಉಪ ಸಮಿತಿಯ ಮಹತ್ವದ ಸಭೆ ಬೆಂಗಳೂರಿನಲ್ಲಿ ನಿನ್ನೆ ನಡೆಯಿತು.

ಅರಣ್ಯ ಖಾತೆ ಸಚಿವ ಈಶ್ವರ್ ಖಂಡ್ರೆ, ಸಚಿವರಾದ ಕೆ.ಜೆ.ಜಾರ್ಜ್, ಡಾಕ್ಟರ್ ಎಚ್.ಸಿ. ಮಹದೇವಪ್ಪ, ದಿನೇಶ್ ಗುಂಡೂರಾವ್, ಮಧು ಬಂಗಾರಪ್ಪ ಹಾಗೂ ಮಂಕಾಳ ವೈದ್ಯ ಸಭೆಯಲ್ಲಿ ಪಾಲ್ಗೊಂಡಿದ್ದರು.

*******

ಹುಬ್ಬಳ್ಳಿ ಧಾರವಾಡ ಅವಳಿ ನಗರದ ಸರ್ವಾಂಗೀಣ ಅಭಿವೃದ್ಧಿಗೆ, ಎಲ್ಲ ಇಲಾಖೆಗಳ ಅಧಿಕಾರಿಗಳು, ಪರಸ್ಪರ ಸಮನ್ವಯ ಮತ್ತು ಹೊಣೆಗಾರಿಕೆ ಅರಿತು ಬದ್ಧತೆಯಿಂದ ಕೆಲಸ ಮಾಡುವಂತೆ, ಜಿಲ್ಲಾ ಉಸ್ತುವಾರಿ ಸಚಿವ ಸಂತೋ ್ ಲಾಡ್ ಸೂಚಿಸಿದ್ದಾರೆ.

ಹುಬ್ಬಳ್ಳಿ ಐ.ಟಿ. ಪಾರ್ಕ್‌ನ, ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಸಭಾಂಗಣದಲ್ಲಿ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ, ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದ ಅವರು, ಆಧುನಿಕ ತಂತ್ರಜ್ಞಾನವನ್ನು ಉತ್ತಮ ರೀತಿಯಲ್ಲಿ ಬಳಸಿಕೊಳ್ಳಬೇಕು. ಡಿಜಿಟಲ್ ಆನ್‌ಲೈನ್ ವ್ಯವಸ್ಥೆ ಮತ್ತು ನವೀನ ಕಲ್ಪನೆಯ ಯೋಜನೆಗಳ ಬಗ್ಗೆ, ಸಮರ್ಪಕ ಕ್ರಿಯಾಯೋಜನೆ ರೂಪಿಸಿ, ಜನಸ್ನೇಹಿ ಆಡಳಿತಕ್ಕೆ ಒತ್ತು ನೀಡುವಂತೆ, ಸಚಿವರು ನಿರ್ದೇಶಿಸಿದರು.

*******

ಕಲ್ಯಾಣ ಕರ್ನಾಟಕ ಪ್ರದೇಶದ, ಯಾವುದೇ ಗ್ರಾಮೀಣ ಭಾಗದಲ್ಲಿ, ಹೃದಯಾಘಾತ ಅಥವಾ ಹೃದಯ ಸಂಬಂಧಿ ತೊಂದರೆ ಕಂಡುಬಂದಲ್ಲಿ, ತಕ್ಷಣವೇ ರೋಗಿಗೆ ಸೂಕ್ತ ಚಿಕಿತ್ಸೆ ನೀಡಲು, ಹಬ್ & ಸ್ಪೋಕ್ ಮಾದರಿ, ಹಾರ್ಟ್ ಲೈನ್ ಸೇವೆ ಆರಂಭಿಸುವುದಾಗಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾಕ್ಟರ್ ಅಜಯ್ ಸಿಂಗ್ ತಿಳಿಸಿದ್ದಾರೆ.

ಕಲಬುರಗಿಯಲ್ಲಿ ನಿರ್ಮಾಣದ ಹಂತದಲ್ಲಿರುವ, ಜಯದೇವ ಹೃದ್ರೋಗ ಆಸ್ಪತ್ರೆಗೆ ನಿನ್ನೆ ಭೇಟಿ ನೀಡಿ, ಕಾಮಗಾರಿ ಪರಿಶೀಲಿಸಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದ ಪ್ರತಿ ತಾಲೂಕಿಗೆ ಒಂದರಂತೆ, ಮಂಡಳಿಯಿಂದ ಒಟ್ಟು 50 ಆಂಬುಲನ್ಸ್ ಸೇವೆ ಪೂರೈಸಲಾಗುವುದು ಎಂದರು.

*******

ಉತ್ತರಕನ್ನಡ ಜಿಲ್ಲೆಯ ಪ್ರವಾಸಿ ಸ್ಥಳಗಳನ್ನು ಮೇಲ್ದರ್ಜೆಗೇರಿಸಿ, ಪ್ರವಾಸಿಗರನ್ನು ಆಕರ್ಷಿಸಲು, ಕೇಂದ್ರ ಪ್ರವಾಸೋದ್ಯಮ ಸಚಿವಾಲಯ, 'ದೇಖೋ ಅಪ್ನಾ ದೇಶ್; ಪೀಪಲ್ಸ್ ಚಾಯ್ಸ್' ಅಭಿಯಾನದಡಿ, ಮತ ಚಲಾಯಿಸುವಂತೆ, ಪ್ರವಾಸೋದ್ಯಮ ಇಲಾಖೆ, ಜನತೆಯಲ್ಲಿ ಮನವಿ ಮಾಡಿದೆ.

ಉತ್ತರಕನ್ನಡ ಜಿಲ್ಲೆಯ ಪ್ರವಾಸಿ ತಾಣಗಳನ್ನು, ಲಿಂಕ್ innovateindia.mygov.in ಮೂಲಕ ಆಯ್ಕೆ ಮಾಡುವಂತೆ, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕರು ಕೋರಿದ್ದಾರೆ.

*******

ಮಹಾರಾಷ್ಟ್ರದ ಪಶ್ಚಿಮಘಟ್ಟ ಪ್ರದೇಶದಲ್ಲಿ ಸುರಿಯುತ್ತಿರುವ ನಿರಂತರ ಮಳೆಯಿಂದಾಗಿ, ಕೃಷ್ಣ ನದಿ ಹಾಗೂ ಉಪನದಿಗಳಾದ ವೇದಗಂಗಾ, ಪಂಚಗಂಗಾ ಹಾಗೂ ದೂಧಗಂಗಾ ನದಿಗಳು, ಮತ್ತೆ ಮೈದುಂಬಿ ಹರಿಯುತ್ತಿವೆ.

ಪರಿಣಾಮ ಬೆಳಗಾವಿ ಜಿಲ್ಲೆಯ ಕುಡಚಿ–ಉಗಾರ ಸಂಪರ್ಕಿಸುವ ಪ್ರಮುಖ ಸೇತುವೆ ಮುಳುಗಡೆಯಾಗಿದೆ. ಅಕ್ಕೋಳ, ಜತ್ರಾಟ, ಭೋಜ್, ಕುನ್ನೂರು ಹಾಗೂ ಸುತ್ತಲಿನ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ, ಕೆಳಹಂತದ ಎಲ್ಲ ಸೇತುವೆಗಳು ಜಲಾವೃತ್ತಗೊಂಡಿದ್ದು, ಜಿಲ್ಲಾಡಳಿತ ಪರ್ಯಾಯ ಸಂಪರ್ಕ ವ್ಯವಸ್ಥೆ ಕಲ್ಪಿಸಿದೆ.

ಬೆಳಗಾವಿ ಜಿಲ್ಲೆಯಾದ್ಯಂತ, ಕಳೆದ ಮೂರ್ನಾಲ್ಕು ದಿನಗಳಿಂದ ಸತತ ಮಳೆಯಾಗುತ್ತಿದೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಕೇಂದ್ರ ನೀತಿ ಆಯೋಗ ಸಂಚಾಲಿತ, ಸಂಪೂರ್ಣತಾ ಅಭಿಯಾನದಡಿ, ಉತ್ತಮವಾಗಿ ಕಾರ್ಯಕ್ರಮ ಆಯೋಜಿಸಿದ ತಾಲೂಕುಗಳಿಗೆ, ಮಹತ್ವಾಕಾಂಕ್ಷೆಯ ಡೆಲ್ಟಾ ರ್‍ಯಾಂಕ್–2024 ಘೋಷಿಸಲಾಗಿದೆ.

ದಕ್ಷಿಣ ಭಾರತ ವಲಯದಡಿ, ಕಲಬುರಗಿ ಜಿಲ್ಲೆಯ ಅಫಜಲಪೂರ, ಶಹಾಬಾದ ಹಾಗೂ ಕಾಳಗಿ, ಈ ಮೂರು ತಾಲೂಕುಗಳನ್ನು ಮಹತ್ವಕಾಂಕ್ಷೆ ತಾಲೂಕುಗಳೆಂದು ಗುರುತಿಸಲಾಗಿದ್ದು, ಕಲಬುರಗಿ ಜಿಲ್ಲೆಯ ಕಾಳಗಿ ತಾಲೂಕು ಎರಡನೇ ರ್‍ಯಾಂಕ್ ಪಡೆದಿದೆ.

ಕಾಳಗಿ ತಾಲೂಕಿನಲ್ಲಿ ಸಂಪೂರ್ಣತಾ ಕಾರ್ಯಕ್ರಮಗಳ ಉತ್ತಮ ನಿರ್ವಹಣೆಗೆ ನೀತಿ ಆಯೋಗದಿಂದ ಎರಡನೇ ರ್‍ಯಾಂಕ್ ಪಡೆದಿರುವುದಕ್ಕೆ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹರ್ಷ ವ್ಯಕ್ತಪಡಿಸಿದ್ದಾರೆ.

ಕೇಂದ್ರದ ನೀತಿ ಆಯೋಗ, ದೇಶದಾದ್ಯಂತ 500 ಹಿಂದುಳಿದ ಬ್ಲಾಕ್‌ಗಳನ್ನು ಮಹತ್ವಾಕಾಂಕ್ಷೆ ತಾಲೂಕುಗಳೆಂದು ಗುರುತಿಸಿ, ಅಲ್ಲಿ ಶಿಕ್ಷಣ, ಆರೋಗ್ಯ, ಕೌಶಲ, ಅಪೌಷ್ಟಿಕತೆ ನಿವಾರಣೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಕೃಷಿ, ಮೂಲಸೌಕರ್ಯ ಬಲವರ್ಧನೆ ಸೇರಿದಂತೆ, ಜನರ ಜೀವನ ಮಟ್ಟದ ಸುಧಾರಣೆಗೆ, ಪರಿಣಾಮಕಾರಿಯಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲು, ಒತ್ತು ನೀಡುತ್ತಿದೆ. ಕಾಳಗಿ ತಾಲೂಕು ಎರಡನೇ ರ್‍ಯಾಂಕ್ ಪಡೆದಿರುವುದರಿಂದ ಕೇಂದ್ರದಿಂದ ಹೆಚ್ಚಿನ ಅನುದಾನ ನಿರೀಕ್ಷಿಸಲಾಗಿದೆ.

*******

ಹಾಕಿ ದಿಗ್ಗಜ, ಮೇಜರ್ ಧ್ಯಾನ್‌ಚಂದ್ ಅವರ ಜನ್ಮ ದಿನವಾದ ಇಂದು, ದೇಶಾದ್ಯಂತ ರಾಷ್ಟ್ರೀಯ ಕ್ರೀಡಾ ದಿನ ಆಚರಿಸಲಾಗುತ್ತಿದೆ.

ಭಾರತದ ಹಾಕಿ ದಂತಕತೆ, ಶ್ರೇ ್ಠ ಹಾಕಿ ಆಟಗಾರ ಮೇಜರ್ ಧ್ಯಾನ್‌ಚಂದ್ ಅವರ ಸ್ಮರಣಾರ್ಥ, 2012 ರಿಂದ ದೇಶಾದ್ಯಂತ ರಾಷ್ಟ್ರೀಯು ಕ್ರೀಡಾ ದಿನವೆಂದು ವಿಶಿಷ್ಟವಾಗಿ ಆಚರಿಸಲಾಗುತ್ತಿದೆ.

2012 ಆಗಸ್ಟ್ 29 ನ್ನು ರಾಷ್ಟ್ರೀಯ ದಿನಾಚರಣೆಗಳ ಪಟ್ಟಿಗೆ ಸೇರಿಸಲಾಗಿದ್ದು, ಒಲಿಂಪಿಕ್‌ನಲ್ಲಿ ಭಾರತದ ಹಾಕಿ ತಂಡ ಇದುವರೆಗೆ 8 ಬಾರಿ ಚಿನ್ನದ ಪದಕ ಗೆಲ್ಲುವ ಮೂಲಕ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಐತಿಹಾಸಿಕ ಸಾಧನೆ ಮಾಡಿದೆ.

*******

ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಮಹತ್ವಾಕಾಂಕ್ಷೆಯ, ಖೇಲೋ ಇಂಡಿಯಾ ಯೋಜನೆ ಅಡಿ, 'ಖೇಲೇಗಾ ಇಂಡಿಯಾ ತೋ ಖಿಲೇಗಾ ಇಂಡಿಯಾ' ಧ್ಯೇಯದೊಂದಿಗೆ, ಈ ಬಾರಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಆಯೋಜಿಸಿದ್ದಾಗಿ, ಕೇಂದ್ರದ ಕ್ರೀಡೆ ಹಾಗೂ ಯುವಜನ ಖಾತೆ ಸಚಿವ ಮನ್ಸುಖ್ ಮಾಂಡವೀಯ, ಹೊಸ ದಿಲ್ಲಿಯಲ್ಲಿ ತಿಳಿಸಿದ್ದಾರೆ.

*******

ರಾಷ್ಟ್ರೀಯ ಕ್ರೀಡಾ ದಿನಾಚರಣೆ ಹಿನ್ನೆಲೆ, ಧಾರವಾಡದ ಆರ್.ಎನ್. ಶೆಟ್ಟಿ ಕ್ರೀಡಾಂಗಣ, ಹುಬ್ಬಳ್ಳಿಯ ನೆಹರು ಮೈದಾನದಲ್ಲಿ ಇಂದು ಬೆಳಗ್ಗೆ ಒಂದು ಗಂಟೆಗಳ ಹೊರಾಂಗಣ ಕ್ರೀಡೆಗಳನ್ನು ಆಯೋಜಿಸಿ, ಮೇಜರ್ ಧ್ಯಾನ್‌ಚಂದ್ ಅವರ ಕೊಡುಗೆಯನ್ನು ಸ್ಮರಿಸಲಾಗುತ್ತಿದೆ.

*******

ಬಾಲ ಕಾರ್ಮಿಕರು ಹಾಗೂ ಕಿಶೋರ ಕಾರ್ಮಿಕರ ಪತ್ತೆ ಕಾರ್ಯಾಚರಣೆ ಅಭಿಯಾನ ಮಾಸಿಕ, ರಾಜ್ಯಾದ್ಯಂತ ನಾಡಿದ್ದು 31 ರಂದು ಕೊನೆಗೊಳ್ಳಲಿದೆ.

78 ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ, ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಆಯೋಜಿಸಿದ್ದ ಜನ ಜಾಗ್ರತಿ ಆಂದೋಲನ, 29 ದಿನಗಳನ್ನು ಪೂರ್ಣಗೊಳಿಸಿದೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ನಗರದ ವೆಲ್ಡಿಂಗ್ ಅಂಗಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ, ಕಿಶೋರ ಕಾರ್ಮಿಕನೋರ್ವನನ್ನು ರಕ್ಷಿಸಿ, ಮಕ್ಕಳ ರಕ್ಷಣಾ ಇಲಾಖೆಯ ಸುಪರ್ದಿಗೆ ನೀಡಿದ್ದು, ಸರ್ಕಾರಿ ಪ್ರೌಢಶಾಲೆಗೆ ಹೆಸರು ದಾಖಲಿಸಲು, ಕ್ರಮವಹಿಸಲಾಗಿದೆ ಎಂದು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

*******

ರಾಮನಗರ ಜಿಲ್ಲೆಯಲ್ಲಿ, ಮಹಿಳಾ ಸಹಾಯವಾಣಿ 1–8–1 ಮೂಲಕ, 8 ಕರೆಗಳು ಸ್ವೀಕೃತವಾಗಿದ್ದು, ಪೊಲೀಸ್ ನೆರವು, ಕಾನೂನು ಸಲಹೆ ಹಾಗೂ ಆಪ್ತ ಸಮಾಲೋಚನೆ ಒದಗಿಸಲಾಗಿದೆ ಎಂದು, ಜಿಲ್ಲಾಧಿಕಾರಿ ಯಶವಂತ ಗುರುಕರ್ ತಿಳಿಸಿದ್ದಾರೆ.

*******

ಆದಿಕವಿ ಪಂಪ ದೇಸಿ ಮಾರ್ಗದಲ್ಲಿ ಅನೇಕ ಕೃತಿಗಳನ್ನು ರಚಿಸಿರುವ ಆದಿಕವಿ ಪಂಪ ಅವರನ್ನು ಹೊಸ ಕಾಲಕ್ಕೆ ತಕ್ಕಂತೆ ನೋಡುವ ಅಗತ್ಯ ಇದೆ ಎಂದು ಹಿರಿಯ ವಿದ್ವಾಂಸ ಹಂಪ ನಾಗರಾಜಯ್ಯ ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ವಿಶ್ವವಿದ್ಯಾಲಯದ ಆರ್.ಸಿ.ಹಿರೇಮಠ ಕನ್ನಡ ಅಧ್ಯಯನ ಪೀಠದಲ್ಲಿ ನಿನ್ನೆ  ಏರ್ಪಡಿಸಿದ್ದ ಆದಿಕವಿ ಪಂಪ ಅಧ್ಯಯನ ಪೀಠದ ಉದ್ಘಾಟನೆ, ಗ್ರಂಥಗಳ ಲೋಕಾರ್ಪಣೆ, ಆದಿಕವಿ ಪಂಪನ ಚಿತ್ರ ಅನಾವರಣ ಮತ್ತು ಪಂಪ ವ್ಯಾಖ್ಯಾನ ಮಾಲೆ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಪಂಪ ಕನ್ನಡ ಭಾಷೆಯ ಮೇಲೆ ಪ್ರೀತಿ ಹೊಂದಿದ್ದರು. ಭಾಷೆ ಮೇಲೆ ಹಿಡಿತ ಸಾಧಿಸಿದ್ದರು. ಅವರ ಬಹುತೇಕ ಕೃತಿಗಳಲ್ಲಿ ತಾಯ್ನಾಡಿನ ವರ್ಣನೆ ಹಾಸು ಹೊಕ್ಕಾಗಿದೆ ಎಂದು ಅವರು ಹೇಳಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಪ್ರಧಾನಮಂತ್ರಿ ಜನ್ ಧನ್ ಯೋಜನೆ, ಹತ್ತು ವರ್ಷಗಳನ್ನು ಪೂರೈಸಿದ್ದು, ಈ ಯೋಜನೆಯಡಿ ಈವರೆಗೆ 53 ಕೋಟಿ 14 ಲಕ್ಷ ಜನ ಫಲಾನುಭವಿಗಳು, ಬ್ಯಾಂಕ್ ಖಾತೆಗಳನ್ನು ತೆರೆದಿದ್ದಾರೆ.

ರಾಜ್ಯದ ಎಲ್ಲ 31 ಜಿಲ್ಲೆಗಳಾದ್ಯಂತ, ಸೆಪ್ಟೆಂಬರ್ 1 ರಿಂದ, 21 ನೇ ಜಾನುವಾರು ಗಣತಿಯನ್ನು, ಪಶುಪಾಲನಾ ಇಲಾಖೆ ಆಯೋಜಿಸಿದೆ. ಲೈವ್ ಸ್ಟಾಕ್ ಆಪ್ ಮೂಲಕ, ಗಣತಿ ನಡೆಯಲಿದೆ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ, ಇದೇ 31 ರಂದು ರಾಜಭವನ ಚಲೋ ಆಯೋಜಿಸಿದ್ದಾಗಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಬೆಂಗಳೂರಿನಲ್ಲಿ ತಿಳಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಘಟಪ್ರಭಾ ಪ್ರವಾಹ ಸಂತ್ರಸ್ತರಿಗೆ ಹಾನಿ ಹಿನ್ನೆಲೆ: ಶಾಶ್ವತ ಪರಿಹಾರ ಕಲ್ಪಿಸಲು ಶೀಘ್ರ ಕ್ರಮ–ಮುಖ್ಯಮಂತ್ರಿ ಸಿದ್ದರಾಮಯ್ಯ.

ಹುಬ್ಬಳ್ಳಿ–ಧಾರವಾಡ ಅವಳಿ ನಗರ ಅಭಿವೃದ್ಧಿ: ಸಮನ್ವಯತೆಯಿಂದ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸಚಿವ ಸಂತೋ ್ ಲಾಡ್ ಸೂಚನೆ.

ಕೇಂದ್ರ ನೀತಿ ಆಯೋಗ ಸಂಚಾಲಿತ, ಸಂಪೂರ್ಣತಾ ಅಭಿಯಾನ: ಕಲಬುರಗಿ ಜಿಲ್ಲೆಯ ಕಾಳಗಿ ತಾಲೂಕಿಗೆ ಎರಡನೇ ರ್‍ಯಾಂಕ್.

ಹಾಕಿ ದಿಗ್ಗಜ, ಮೇಜರ್ ಧ್ಯಾನ್‌ಚಂದ್ ಅವರ ಜನ್ಮದಿನ ಹಿನ್ನೆಲೆ, ಇಂದು ದೇಶಾದ್ಯಂತ ರಾಷ್ಟ್ರೀಯ ಕ್ರೀಡಾ ದಿನ ಆಚರಣೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

*** ***